**ಮಾನ್ಯ ವಿಧಾನಸಭಾ ಸದಸ್ಯರಾದ ಶ್ರೀ ದೊಡ್ಡಗೌಡರ ಮಹಾಂತೇಶ ಬಸವಂತರಾಯ (ಕಿತ್ತೂರು)**

**ಇವರ ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ :249ಕ್ಕೆ ಉತ್ತರ**

<table>
<tr><th>ಕ್ರಮ ಸಂಖ್ಯೆ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಕಳೆದ ಮೂರು ವರ್ಷಗಳಿಂದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ರಾಜ್ಯದ ವಿವಿಧ ವಿಧಾನಸಭಾ ಕ್ಷೇತ್ರಗಳಿಗೆ ಯಾವ ಯಾವ ಯೋಜನೆಗಳಿಗೆ ಅನುದಾನ ಬಿಡುಗಡೆ ಮಾಡಲಾಗಿದೆ<br>(ವಿವರ ನೀಡುವುದು);</td><td>ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ಕಳೆದ ಮೂರು ವರ್ಷಗಳಿಂದ ರಾಜ್ಯದ ವಿವಿಧ ವಿಧಾನಸಭಾ ಕ್ಷೇತ್ರಗಳಿಗೆ ಬಿಡುಗಡೆ ಹಾಗೂ ಖರ್ಚು ಮಾಡಿರುವ ಅನುದಾನದ ಮಾಹಿತಿಯನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿರುತ್ತದೆ.<br>ಇಲಾಖಾ ವೆಬ್‌ಸೈಟ್ ವಿಳಾಸ ಈ ಕೆಳಕಂಡಂತಿದೆ.<br>www.backwardclasses.kar.nic.in</td></tr>
<tr><td>ಆ)</td><td>ಚನ್ನಮ್ಮನ ಕಿತ್ತೂರು ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಸರ್ಕಾರ ಮೂರು ವರ್ಷ ಗಳಿಂದ ಯಾವ ಯಾವ ಯೋಜನೆ ಗಳಿಗೆ ಅನುಮೋದನೆ ನೀಡಲಾಗಿದೆ; ಬೇಡಿಕೆ ಯಿರುವ ಯೋಜನೆಗಳಾವುವು;</td><td>ಕಿತ್ತೂರು ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ವಿವಿಧ ಸಮುದಾಯಗಳ ಅಭಿವೃದ್ಧಿ ಕಾರ್ಯಕ್ರಮಡಿ 2017-18ನೇ ಸಾಲಿನಲ್ಲಿ 08 ಸಮುದಾಯ ಭವನ ನಿರ್ಮಾಣಕ್ಕೆ ಬೇಡಿಕೆ ಬಂದಿದ್ದು, ಅದರಂತೆ 08 ಸಮುದಾಯ ಭವನ ನಿರ್ಮಾಣಕ್ಕೆ ಅನುಮೋದನೆ ನೀಡಲಾಗಿದೆ.<br>ಕಿತ್ತೂರು ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಈ ಕೆಳಕಂಡ ಕಟ್ಟಡ ದುರಸ್ಥಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ.
<table>
<tr><th>ಕ್ರ. ಸಂ.</th><th>ವಿವರ</th><th>ಮೊತ್ತ (ರೂ. ಲಕ್ಷಗಳಲ್ಲಿ)</th></tr>
<tr><td>1</td><td>ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ, ಕಿತ್ತೂರ</td><td>6.50</td></tr>
<tr><td>2</td><td>ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ, ಹುಣಶಿಕಟ್ಟಿ</td><td>2.50</td></tr>
<tr><td>3</td><td>ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ, ನೇಸರಗಿ</td><td>4.79</td></tr>
<tr><td>4</td><td>ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ, ದೇಶನೂರ</td><td>3.50</td></tr>
</table>
ಕಿತ್ತೂರು ವಿಧಾನಸಭಾ ಕ್ಷೇತ್ರದ ಉಗುರಖೋಡ ಗ್ರಾಮದಲ್ಲಿ ಸಮುದಾಯ ಭವನ ನಿರ್ಮಾಣಕ್ಕೆ ಅನುದಾನದ ಮಂಜೂರಾತಿ ಬೇಡಿಕೆ ಇರುತ್ತದೆ. ಈ ಸಂಬಂಧ ಜಿಲ್ಲಾಧಿಕಾರಿಗಳು, ಬೆಳಗಾವಿ ಜಿಲ್ಲೆ ಇವರಿಂದ ಪ್ರಸ್ತಾವನೆ ಪಡೆದು, ಅನುದಾನ ಲಭ್ಯತೆ ಆಧಾರದ ಮೇಲೆ ಪರಿಶೀಲಿಸಲಾಗುವುದು.</td></tr>
<tr><td>ಇ)</td><td>ಅನುದಾನ ನೀಡಿಕೆಯಲ್ಲಿ ತಾರತಮ್ಯ ವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td>ಕಾರ್ಯಕ್ರಮಗಳ ಅನುಷ್ಠಾನಕ್ಕಾಗಿ ಬೇಡಿಕೆಗೆ ಅನುಗುಣ ವಾಗಿ ಅನುದಾನವನ್ನು ಬಿಡುಗಡೆ ಮಾಡಲಾಗಿರುತ್ತದೆ. ಆದ್ದರಿಂದ ಅನುದಾನ ನೀಡಿಕೆಯಲ್ಲಿ ತಾರತಮ್ಯ ಉಂಟಾಗಿರುವುದಿಲ್ಲ.</td></tr>
<tr><td>ಈ)</td><td>ಸದರಿ ತಾರತಮ್ಯ ಸರಿಪಡಿಸಿ ಚನ್ನಮ್ಮನ ಕಿತ್ತೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಸಂಬಂಧಿಸಿದ ಯೋಜನೆಗಳಿಗೆ ಅನುದಾನ ನೀಡಲು ಸರ್ಕಾರದ ಕ್ರಮವೇನು ?</td><td>ರಾಜ್ಯದ ಒಟ್ಟಾರೆ ಬೇಡಿಕೆ ಹಾಗೂ ಆಯವ್ಯಯದ ಲಭ್ಯತೆಗೆ ಅನುಗುಣವಾಗಿ ಇಲಾಖಾ ಕಾರ್ಯಕ್ರಮಗಳ ಅನುಷ್ಠಾನಕ್ಕೆ ಅನುದಾನವನ್ನು ಬಿಡುಗಡೆ ಮಾಡಲಾಗುತ್ತಿದೆ.</td></tr>
</table>

ಆಯುಕ್ತರು
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
ಬೆಂಗಳೂರು



E:\LALC Question\2018-19\Assembly\July-2019\LAQ-249.docx